ಓ.ಎಸ್. ನಂ.**266/2022**

ಪಿ.ಡಬ್ಲೂ.**1**

ದಿನಾಂಕಃ 20.07.2023 ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.

ಮುಖ್ಯ ವಿಚಾರಣೆ ವಾದಿ ಪರ ಶ್ರೀ ಕೆ.ವಿ.ವಿ. ವಕೀಲರಿಂದ

ನಾನು ಈ ದಾವೆಯ ವಾದಿಯಾಗಿರುತ್ತೇನೆ. ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರವನ್ನು ಸಲ್ಲಿಸಿದ್ದೇನೆ. ಸದರಿ ಪ್ರಮಾಣ ಪತ್ರಿಕೆಯಲ್ಲಿ ಹೇಳಿರುವ ಅಂಶಗಳನ್ನು ನಾನೇ ಹೇಳಿ ಬರೆಯಿಸಿದ್ದೇನೆ ಹಾಗೂ ಅವು ಸತ್ಯವಾಗಿರುತ್ತವೆಂದು ಪ್ರಮಾಣೀಕರಿಸುತ್ತೇನೆ. ಸದರಿ ಪ್ರಮಾಣ ಪತ್ರಿಕೆಯಲ್ಲಿ ಅಂಶಗಳನ್ನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ಪ್ರತಿವಾದಿ ನೀಡಿರುವ ಚೆಕ್ ನ್ನು ನಿಪಿ-1 ಎಂದು, ಸಾಕ್ಷಿಯು ನಿಪಿ-1 ರ ಮೇಲಿರುವ ಪ್ರತಿವಾದಿ ಸಹಿಗಳನ್ನು ನೋಡಿ ಗುರುತಿಸಿದ್ದು, ಸದರಿ ಸಹಿಗಳನ್ನು ನಿಪಿ-1(ಎ) ಮತ್ತು (ಬಿ) ಎಂದು ಗುರುತಿಸಲಾಯಿತು.

ದಿಃ20.12.2019 ರ ಮೇಮೋ ವನ್ನು ನಿಪಿ-2 ಎಂದು, ದಿಃ20.01.2020 ರಂದು ಪ್ರತಿವಾದಿಗೆ ಕಳುಹಿಸಲಾದ ತಿಳುವಳಿಕೆ ಪತ್ರದ ಕಚೇರಿ ಪ್ರತಿಯನ್ನು ನಿಪಿ-3 ಎಂದು, ತಿಳುವಳಿಕೆ ಪತ್ರವನ್ನು ಅಂಚೆ ಮುಖೇನ ಕಳುಹಿಸಿದ ಬಗ್ಗೆ ರಶೀದಿಯನ್ನು ನಿಪಿ-3(ಎ) ಎಂದು, ಪ್ರತಿವಾದಿಗೆ ತಿಳುವಳಿಕೆ ಪತ್ರ ಜಾರಿಯಾಗದೇ ವಾಪಸ್ಸು ಬಂದ ಬಗ್ಗೆ ಅಂಚೆ ಲಕೋಟೆಯನ್ನು ಹಾಜರುಪಡಿಸಿದ್ದು, ಅದನ್ನು ತೆರೆದ ನ್ಯಾಯಾಲಯದಲ್ಲಿ ತೆರೆದು, ತಿಳುವಳಿಕೆ ಪತ್ರ ಹಾಗೂ ಲಕೋಟೆಯನ್ನು ಒಟ್ಟಾಗಿ ನಿಪಿ-4 ಎಂದು, ದಿಃ15.11.2022 ರಂದು ಪ್ರತಿವಾದಿಗೆ ಕಳುಹಿಸಲಾದ ತಿಳುವಳಿಕೆ ಪತ್ರದ ಕಚೇರಿ ಪ್ರತಿಯನ್ನು ನಿಪಿ-5 ಎಂದು, ತಿಳುವಳಿಕೆ ಪತ್ರ ಜಾರಿಯಾದ ಬಗ್ಗೆ ಅಂಚೆ ಸ್ವೀಕೃತಿಯನ್ನು ನಿಪಿ-5(ಎ), ಗುರುತಿಸಲಾಯಿತು.

ಹಾಗಾಗಿ ದಾವೆಯನ್ನು ಪುರಸ್ಕರಿಸಬೇಕೆಂದು ಕೋರಿಕೊಳ್ಳುತ್ತೇನೆ.

**ಪಾಟೀಸವಾಲು ಪ್ರತಿವಾದಿ ಪರ ಶ್ರೀ ವಿ.ಕೆ. ವಕೀಲರಿಂದಃ**

ಪ್ರತಿವಾದಿ ಪರ ವಕೀಲರು ಹಾಜರಿದ್ದು, ಪಾಟೀಸವಾಲಿಗಾಗಿ ಕಾಲಾವಕಾಶ ಕೋರಿದ್ದು, ಆಲಿಸಿ ಅನುಮತಿಸಲಾಯಿತು.

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.

ಓ.ಹೇ.ಕೇ.ಸರಿ ಇದೆ.

ಪ್ರಧಾನ ಸಿವಿಲ್ ಮತ್ತು ಜೆ.ಎಂ.ಎಫ್.ಸಿ,
ನ್ಯಾಯಾಧೀಶರು, ಹುಣಸೂರು.